# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 18.02.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಿಯಂತ್ರಣ ಕೊಠಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಸಾರ್ವಜನಿಕರಿಂದ ಬರುವ ದೂರುಗಳಿಗೆ ಸ್ಪಂಧಿಸದೇ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ಬಂದ ದೂರಿನ ಹಿನ್ನೆಲೆಯಲ್ಲಿ ಕೇಂದ್ರ ಕಛೇರಿಯ ಹಾಗೂ ಎಲ್ಲಾ ವಲಯದ ನಿಯಂತ್ರಣ ಕೊಠಡಿಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳನ್ನು ಮಾತೃ ವಿಭಾಗಕ್ಕೆ ಕಳುಹಿಸಿ, ಬೇರೆ ಸಿಬ್ಬಂದಿಯನ್ನು ನಿಯೋಜಿಸಿ, ಪಾಲಿಕೆ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ನಿಯಂತ್ರಣ ಕೊಠಡಿಗಳಲ್ಲಿ ಕಾರ್ಯನಿರ್ವಹಿಸಲು ಹೊಸದಾಗಿ 12 ತಂಡಗಳನ್ನು ರಚಿಸಲಾಗಿದ್ದು, ಪ್ರತಿ ತಂಡವು ಒಂದು ತಿಂಗಳವರೆಗೆ ಮಾತ್ರ ಕಾರ್ಯನಿರ್ವಹಿಸತಕ್ಕದ್ದು, ಹಾಗೂ ಪ್ರತಿ ತಂಡದ ಮೇಲ್ವಿಚಾರಣೆಯನ್ನು ನೋಡಿಕೊಳ್ಳಲು ಒಬ್ಬ ಹಿರಿಯ ಅಧಿಕಾರಿಯನ್ನು ನೇಮಿಸಲಾಗಿದೆ.

ನಗರದಲ್ಲಿ ಮಳೆಗಾಲದಲ್ಲಿ ಪ್ರವಾಹದಿಂದ ಉಂಟಾಗುವ ಅನಾಹುತಗಳನ್ನು ತಪ್ಪಿಸಲು ಪಾಲಿಕೆಯಿಂದ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಇಂದು ವಲಯ ಮಟ್ಟದ ಅಧಿಕಾರಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಆಯುಕ್ತರು, ಮಳೆಗಾಲ ಪ್ರಾರಂಭವಾಗಲು ಇನ್ನೂ 3-4 ತಿಂಗಳ ಕಾಲಾವಕಾಶ ಇರುವುದರಿಂದ ಈ ಕೆಳಕಂಡ ಮುಂಜಾಗ್ರತೆ ಕ್ರಮಗಳನ್ನು ಪಾಲಿಕೆಯಿಂದ ಕೈಗೊಳ್ಳಲು ಸೂಚಿಸಿದರು.

- ರಸ್ತೆಬದಿ ಇರುವ ಶೋಲ್ಡರ್ ಡ್ರೈನ್, ಬಾಕ್ಸ್ ಡ್ರೈನ್ ಮತ್ತು ಮಳೆ ನೀರಿನ ದೊಡ್ಡ ಮೋರಿಗಳಲ್ಲಿ ಹೂಳೆತ್ತುವುದು.
- ಪಾಲಿಕೆಗೆ ಸೇರಿದ ಉದ್ಯಾನವನ, ಆಟದ ಮೈದಾನ, ಕಛೇರಿಗಳು ಮತ್ತು ಆಸ್ಪತ್ರೆಗಳಲ್ಲಿ ಮಳೆ ನೀರಿನ ಸಂಗ್ರಹಣೆ ಘಟಕಗಳನ್ನು ತಪ್ಪದೇ ಸ್ಥಾಪಿಸುವುದು.
- ರಸ್ತೆಬದಿ ಮೋರಿಗಳನ್ನು ದುರಸ್ಥಿಪಡಿಸುವುದು ಮತ್ತು ಮೋರಿಗಳಲ್ಲಿ ನೀರು ಇಂಗುವ ಗುಂಡಿಗಳನ್ನು ನಿರ್ಮಿಸುವುದು.
- ಮರಗಳ ರಕ್ಷಣೆ ಮತ್ತು ಅವುಗಳಿಗೆ ಸಾಕಷ್ಟು ನೀರು ಒದಗುವಂತೆ ಪಾತಿ ಮಾಡಿ, ಮರದ ಸುತ್ತಲು ಇಟ್ಟಿಗೆಯಿಂದ ಕಟ್ಟೆ ನಿರ್ಮಿಸುವುದು.
- ನಿಯಂತ್ರಣ ಕೊಠಡಿಗಳನ್ನು ಸುಸಜ್ಜಿತಗೊಳಿಸಲು ಅವಶ್ಯಕ ಗ್ಯಾಂಗ್‌ಮೆನ್‌ಗಳನ್ನು ಮತ್ತು ಸಲಕರಣೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನಿಯೋಜಿಸುವುದು.
- ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳನ್ನು ಗುಂಡಿ ಮುಕ್ತ ರಸ್ತೆಗಳನ್ನಾಗಿ ಮಾಡುವುದು.
- ಅವಶ್ಯಕತೆ ಇದ್ದಲ್ಲಿ ಮಳೆ ನೀರಿನ ಮೋರಿಗಳಿಗೆ ತಡೆಗೋಡೆ ನಿರ್ಮಿಸುವುದು.
- ಪ್ರತಿ ವಲಯದಲ್ಲಿ Contingency Plan ಸಿದ್ದಪಡಿಸುವುದು.
- ಸೂಕ್ಷ್ಮ ಪ್ರದೇಶಗಳನ್ನು (Vulnerable Points) ಗುರುತಿಸಿ, ಅಂತಹ ಸ್ಥಳಗಳಲ್ಲಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಫಲಕಗಳನ್ನು ಅಳವಡಿಸುವುದು.

ಈ ಮೇಲಿನ ಎಲ್ಲಾ ಕಾರ್ಯಗಳ ಪ್ರಗತಿಯನ್ನು ವಲಯ ಅಪರ / ಜಂಟಿ ಆಯುಕ್ತರುಗಳು, ಮುಖ್ಯ ಅಭಿಯಂತರರುಗಳು, ಕಾರ್ಯಪಾಲಕ ಅಭಿಯಂತರರುಗಳು ಆಗಿಂದಾಗ್ಗೆ ತಪಾಸಣೆ ಕೈಗೊಂಡು, ನಿಗದಿಪಡಿಸಿದ ನಮೂನೆಯಲ್ಲಿ ವರದಿಯನ್ನು ಸಿದ್ದಪಡಿಸಿ, ಪಾಲಿಕೆ ಆಯುಕ್ತರಿಗೆ ಸಲ್ಲಿಸಬೇಕು. ಅಲ್ಲದೇ, ಮೇಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಅನುಸರಿಸಿ, ಮುಂಬರುವ ಮಳೆಗಾಲದ ಸಂದರ್ಭದಲ್ಲಿ ಯಾವುದೇ ರೀತಿಯ ಅನಾಹುತಗಳಾಗದಂತೆ ತಡೆಗಟ್ಟಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಆರೋಗ್ಯ ಇಲಾಖೆಯಿಂದ ಕೈಗೊಳ್ಳಬೇಕಾದಂತಹ ಕ್ರಮಗಳ ಕುರಿತು ಚರ್ಚಿಸಲು ದಿನಾಂಕ: 23.02.2011 ರಂದು ಸಭೆ ಕರೆಯಲಾಗುವುದೆಂದು ತಿಳಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**